**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.**

**ದಿಃ 04.08.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃ**

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಿಡಿ.14 ಭಕ್ಷಿಶ್ ಪತ್ರಕ್ಕೆ ನಾನು ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ. ನಿಡಿ.14 ದಾಖಲೆಯಲ್ಲಿರುವ ಸಾಕ್ಷಿಯ ಸಹಿಯನ್ನು ನಿಡಿ.14(ಎ) ಎಂದು ಗುರುತಿಸಲಾಯಿತು. ನಿಜಗುಣೆಪ್ಪ ಈತನು ತನ್ನ ಹೆಂಡತಿಯಾದ ಕಮಲವ್ವ ಈಕೆಗೆ ಸದರಿ ಭಕ್ಷಿಶ್ ಪತ್ರವನ್ನು ಮಾಡಿಕೊಟ್ಟಿರುತ್ತಾರೆ. ಅವರ ಸಹಿಗಳನ್ನು ನಾನು ಗುರುತಿಸಬಹುದು. ಕಮಲವ್ವ ನಿಜಗುಣೆಪ್ಪ ಮುಳಗುಂದ ಇವರ ಸಹಿಯನ್ನು ಸಾಕ್ಷಿ ಗುರುತಿಸಿದ ಕಾರಣ ಅದನ್ನು ನಿಡಿ.14(ಬಿ) ಹಾಗೂ ನಿಜಗುಣೆಪ್ಪ ತಂದೆ ಭೀಮಪ್ಪ ಮುಳಗುಂದ ಇವರ ಸಹಿಯನ್ನು ಸಾಕ್ಷಿ ಗುರುತಿಸಿದ ಕಾರಣ ಅದನ್ನು ನಿಡಿ.14(ಸಿ) ಎಂದು ಗುರುತಿಸಲಾಯಿತು.

**(ಪಾಟೀ ಸವಾಲುಃ ವಾದಿ ಪರ ವಕೀಲರನ್ನು ಕೂಗಿ ಕರೆಸಲಾಗಿ ಅವರು ನ್ಯಾಯಾಲಯದಲ್ಲಿ ಗೈರು ಹಾಜರಿರುವ ಕಾರಣ ಪಾಟೀ ಸವಾಲಿಗೆ ಸಮಯಾವಕಾಶ ನೀಡಿ ಮುಂದೂಡಲಾಯಿತು).**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**